# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ: 21/05/2021

**ವಾರ್ಡ್ ಮಟ್ಟದ ವಿಕೇಂದ್ರಿಕೃತ ಚಿಕಿತ್ಸೆಯ ಸರದಿ ನಿರ್ಧಾರ ಮತ್ತು ತುರ್ತು ಪ್ರತಿಕ್ರಿಯೆ ಸಮಿತಿ, ವಾರ್ಡ್ ಸಂಖ್ಯೆ:57, ಸಿ.ವಿ.ರಾಮನ್‌ನಗರ ಸಭೆಯ ನಡವಳಿಗಳು:**

ಮಾನ್ಯ ಮುಖ್ಯ ಆಯುಕ್ತರ ಕಛೇರಿ ಆದೇಶ ಸಂಖ್ಯೆ: ಬಿ12(ಕೋ-19)/04/2021-22 ರಂತೆ ವಾರ್ಡ್-57 ಸಿ.ವಿ.ರಾಮನ್‌ನಗರ ವಾರ್ಡ್ ಮಟ್ಟದ ವಿಕೇಂದ್ರೀಕೃತ ಚಿಕಿತ್ಸೆಯ ಸರದಿ ನಿರ್ಧಾರ ಮತ್ತು ತುರ್ತು ಪ್ರತಿಕ್ರಿಯೆ ಸಮಿತಿ (W.D.C) ಗೆ ನೇಮಿಸಿರುವ ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 19/05/2021 ಬುಧವಾರದಂದು ಬೆಳಿಗ್ಗೆ 11.00 ಘಂಟೆಗೆ ವಾರ್ಡ್-57 ಸಿ.ವಿ.ರಾಮನ್‌ನಗರ ಸಹಾಯ ಕೇಂದ್ರದಲ್ಲಿ ತುರ್ತು ಸಭೆಯನ್ನು ಆಯೋಜಿಸಲಾಯಿತು. ಸಮಿತಿಯ ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳು ಹಾಗೂ ವಾರ್ಡ್‌ನ ನಾಗರೀಕರುಗಳಿಗೆ ಸಭೆಗೆ ಸ್ವಾಗತ ಕೋರಿದರು. ನಂತರ ಮಾನ್ಯ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು. ಸಭೆಯಲ್ಲಿ ಹಾಜರಿದ್ದವರು.

## ಸಭೆಯಲ್ಲಿ ಹಾಜರಿದ್ದರವರು

| ಕ್ರ.ಸಂ | ಹೆಸರು, ಪದನಾಮ |
|---|---|
| 01 | ಶ್ರೀ. ಪ್ರಭಾಕರ ಬಿ, ಕಾರ್ಯಪಾಲಕ ಅಭಿಯಂತರರು, ಸಿ ವಿ ರಾಮನ್ ನಗರ ವಿಭಾಗ, ನೋಡಲ್ ಅಧಿಕಾರಿಗಳು |
| 02 | ಶ್ರೀಮತಿ. ಶಾಂತಾ ಬಾಡಗಂಡಿ, ಸಹಾಯಕ ಅಭಿಯಂತರರು, ಸಮಿತಿ ಸದಸ್ಯ ಕಾರ್ಯದರ್ಶಿ |
| 03 | ಶ್ರೀ. ಪುರುಷೋತ್ತಮ, ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ವಾರ್ಡ್-57 ಸಿ.ವಿ.ರಾಮನ್‌ನಗರ |
| 04 | ಶ್ರೀಮತಿ. ಮೀನಾಕ್ಷಿ, ಕಿರಿಯ / ಹಿರಿಯ ಆರೋಗ್ಯ ನಿರೀಕ್ಷಕರು |
| 05 | ಶ್ರೀಮತಿ. ರೂಪ, ಸಮಾಜ ಕಲ್ಯಾಣ ಇಲಾಖೆ, ಬಿಬಿಎಂಪಿ |
| 06 | ಶ್ರೀಮತಿ. ಸತ್ಯವತಿ, ಸಮಾಜ ಕಲ್ಯಾಣ ಇಲಾಖೆ, ಬಿಬಿಎಂಪಿ |
| 07 | ಶ್ರೀ. ಶೇಷಗಿರಿ, ಕಂದಾಯ ಪರೀವಿಕ್ಷಕರು |
| 08 | ಶ್ರೀ. ನರಸಿಂಹಲು, ಕಂದಾಯ ಪರೀವಿಕ್ಷಕರು |
| 09 | ಶ್ರೀ. ಶ್ರೀನಿವಾಸ, ಕಂದಾಯ ವಸೂಲಿಗಾರರು |
| 10 | ಶ್ರೀ. ಪಳನಿ, ಕಂದಾಯ ವಸೂಲಿಗಾರರು |
| 11 | ಶ್ರೀಮತಿ. ಭಾರತಿ, ಶಿಕ್ಷಕರು |
| 12 | ಶ್ರೀಮತಿ. ರಾಧಿಕ, ಶಿಕ್ಷಕರು |
| 13 | ಶ್ರೀಮತಿ. ವಿಜಯಲಕ್ಷ್ಮೀ, ಶಿಕ್ಷಕರು |

**ಸಭೆಯಲ್ಲಿ ಚರ್ಚಿಸಲಾದ ಸಂಭಾಷಣೆಗಳು:**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಕಳೆದ ಸಭೆಯಲ್ಲಿ ಮಾನ್ಯ ಮುಖ್ಯ ಆಯುಕ್ತರ ಕಛೇರಿ ಆದೇಶ ಸಂಖ್ಯೆ: ಬಿ12(ಕೋ-19)/04/2021-22 ರಂತೆ ಪಾಲಿಕೆಯ ಎಲ್ಲಾ ವಾರ್ಡ್‌ಗಳಲ್ಲಿ ವಾರ್ಡ್ ಮಟ್ಟದ ವಿಕೇಂದ್ರೀಕೃತ ಚಿಕಿತ್ಸೆಯ ಸರದಿ ನಿರ್ಧಾರ ಮತ್ತು ತುರ್ತು ಪ್ರತಿಕ್ರಿಯೆ ಸಮಿತಿ (W.D.C) ಅನ್ನು ರಚಿಸಬೇಕಾಗಿರುತ್ತದೆ ಎಂದು ತಿಳಿಸುತ್ತಾ, ಮಾನ್ಯ ಮುಖ್ಯ ಆಯುಕ್ತರ ಸದರಿ ಆದೇಶದಲ್ಲಿ ನನ್ನನ್ನು ನೋಡೆಲ್ ಅಧಿಕಾರಿಯನ್ನಾಗಿ ನೇಮಿಸಲಾಗಿರುವುದರಿಂದ ನಾನು ಸಮಿತಿಯ ಅಧ್ಯಕ್ಷನಾಗಿರುತ್ತೇನೆ ಹಾಗೂ ವಾರ್ಡ್‌ನ ಸಹಾಯಕ ಅಭಿಯಂತರರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ ಎಂದು ತಿಳಿಸುತ್ತಾ ಮುಂದುವರೆದು, ವಾರ್ಡ್‌ಗೆ ಸಂಬಂಧಿಸಿದ ಪಾಲಿಕೆಯ ಎಲ್ಲಾ ಅಧಿಕಾರಿಗಳು, ವಾರ್ಡ್‌ಗೆ ಸಂಬಂಧಿಸಿದ ಇತರೆ ಎಲ್ಲಾ ಅಧಿಕಾರಿಗಳು, ವಾರ್ಡ್‌ನಲ್ಲಿನ ಸಾಮಾಜಿಕ ಕಲ್ಯಾಣ ಅಸೋಸಿಯೇಷನ್‌ನ ಮುಖ್ಯಸ್ಥರುಗಳು ಹಾಗೂ ಸ್ವಯಂ ಸೇವಕರುಗಳು ಮಾನ್ಯ ಮುಖ್ಯ ಆಯುಕ್ತರ ಆದೇಶದಂತೆ ಸಮಿತಿಯ ಸದಸ್ಯರುಗಳಾಗಿರುತ್ತಾರೆ ಎಂದು ಸಭೆಯಲ್ಲಿ ತಿಳಿಸಿದರು.

- ಮುಂದುವರೆದು, ಮಾನ್ಯ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ : *RD 158 TNR 2020 (1), Dated: 07-05-2021* ರಲ್ಲಿ ವಾರ್ಡ್ ಮಟ್ಟದ W.D.C ಯ ಕಾರ್ಯಗಳು ಹಾಗೂ ಕೈಗೊಳ್ಳಬಹುದಾದ ತೀರ್ಮಾನಗಳ ಬಗ್ಗೆ ಸಂಕ್ಷಿಪ್ತವಾಗಿ ವಿವರಿಸಲಾಗಿರುತ್ತದೆ. ಅದರಲ್ಲಿ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಸೋಂಕಿತ ರೋಗಿಗಳಿಗೆ ಅಗತ್ಯ ಚಿಕಿತ್ಸೆ ದೊರಕಿಸಿಕೊಡಲು ವಾರ್ಡ್ ವ್ಯಾಪ್ತಿಯಲ್ಲಿ Triage room ಅನ್ನು ರಚಿಸಬೇಕಾಗಿರುತ್ತದೆ. ಆದುದರಿಂದ ನಮ್ಮ ವಾರ್ಡ್ ವ್ಯಾಪ್ತಿಯಲ್ಲಿ ಸೂಕ್ತವಾದ 1 ಸ್ಥಳವನ್ನು ಗುರುತಿಸಲಾಗಿತ್ತು, ಆದರೆ ನಂತರ ವಿಭಾಗ ಮಟ್ಟದಲ್ಲಿ ಮಾನ್ಯ ಶಾಸಕರು ವೈದ್ಯಕೀಯ ಸಿಬ್ಬಂದಿಗಳ ಕೊರತೆಯಿಂದಾಗಿ ವಿಭಾಗಕ್ಕೆ ಒಂದು Triage room ಅನ್ನು ಸಿ ವಿ ರಾಮನ್ ನಗರ ವಿಭಾಗಕ್ಕೆ ಹಳೆ ಮದ್ರಾಸು ರಸ್ತೆಯಲ್ಲಿರುವ ಕರ್ನಾಟಕ ಎಂಡೊಕ್ರೊನಾಲಜಿ ಸಂಸ್ಥೆ ಮತ್ತು ಸಂಶೋಧನಾ ಕೇಂದ್ರ (KIER) ಕಟ್ಟಡದಲ್ಲಿ ಮಾಡಲಾಗುವುದೆಂದು ತಿಳಿಸಿರುತ್ತಾರೆ.

- ಆದರೆ, ಸರ್ಕಾರದ ಆದೇಶದಂತೆ ವಾರ್ಡ್ ವ್ಯಾಪ್ತಿಯಲ್ಲಿ W.D.C ಯನ್ನು ರಚಿಸಿ ಅದಕ್ಕೆ ಪ್ರತ್ಯೇಕ ಜನ ಸಂಪರ್ಕ ಕೇಂದ್ರವನ್ನಾದರೂ ರಚಿಸಬೇಕಾಗಿರುತ್ತದೆ. ಆದುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಕಗ್ಗದಾಸಪುರ 19 ನೇ ಕ್ರಾಸ್ ನಲ್ಲಿರುವ ಪ್ರಾಥಮಿಕ ಶಾಲೆಯ ಕಟ್ಟಡವನ್ನು ಗುರುತಿಸಿದ್ದು, ಸದರಿ ಶಾಲೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬೆಂಗಳೂರು ದಕ್ಷಿಣ-4 ತಾಲ್ಲೂಕು ರವರಿಗೆ ಆಜ್ಞಾಪನಾ ಪತ್ರವನ್ನು ನೀಡಲಾಗಿರುತ್ತದೆ.

- ಆಸಕ್ತಿಯುಳ್ಳ ಸ್ಥಳೀಯ ವೈದ್ಯರು, ಶುಷ್ರೂಕಿ ಹಾಗೂ ಸ್ವಯಂ ಸೇವಕರು ರವರನ್ನು ಗುರುತಿಸಿ, Mapping ಮಾಡಲು ಸೂಚಿಸಲಾಯಿತು.

- ಕೋವಿಡ್-19 ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂಧಿಗಳಿಗೆ ಅಗತ್ಯವಿರುವ ಮಾಸ್ಕ್, ಸ್ಯಾನಿಟೈಸರ್, ಗ್ಲೌಸ್ ಹಾಗೂ ಮೆಡಿಕಲ್ ಕಿಟ್‌ಗಳನ್ನು ಒದಗಿಸಲು ವೈದ್ಯಾಧಿಕಾರಿಗಳಿಗೆ ಸೂಚಿಸಲಾಯಿತು.

- ಪ್ರತಿದಿನ ಕೋವಿಡ್-19 ಕಾರ್ಯನಿರ್ವಹಿಸುತ್ತಿರುವ ಸಿಬ್ಬಂಧಿಗಳು ಮಾಹಿತಿಗಳನ್ನು W.D.C ವಾಟ್ಸಾಪ್ ಗ್ರೂಪ್‌ನಲ್ಲಿ ಅಪಡೇಟ್ ಮಾಡಲು ಸೂಚಿಸಲಾಯಿತು.

- ತದನಂತರ, ಸಭೆಯಲ್ಲಿ ಭಾಗವಹಿಸಿದ್ದ ಶ್ರೀ.ಪುರುಷೋತ್ತಮ್, ವೈದ್ಯಾಧಿಕಾರಿಗಳು ಮಾತನಾಡುತ್ತಾ, ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೋವಿಡ್ ಲಸಿಕಾ ಕೇಂದ್ರ ಹಾಗೂ ಪಕ್ಕದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಕಛೇರಿ(ಖಾಲಿ) ಆವರಣದಲ್ಲಿ ಕೋವಿಡ್-19 ಪರೀಕ್ಷೆ ನಡೆಸಲಾಗುತ್ತಿದೆಂದು ತಿಳಿಸಿರು.

- ಶ್ರೀ.ಪುರುಷೋತ್ತಮ್, ವೈದ್ಯಾಧಿಕಾರಿಗಳು ಮಾತನಾಡುತ್ತಾ ಕೋವಿಡ್ ಲಸಿಕಾ ಕೇಂದ್ರದಲ್ಲಿ ನೂಕುನುಗ್ಗಲು ಉಂಟಾಗುತ್ತಿದೆ ಎಂದು ತಿಳಿಸಲಾಗಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳ ನೋಡೆಲ್ ಅಧಿಕಾರಿಗಳ ಗಮನಕ್ಕೆ ತರಲು ಸೂಚಿಸಲಾಯಿತು ಹಾಗೂ ಸ್ವಯಂ ಸೇವಕರ ಸಹಾಯಕ ಪಡೆಯಲು ಸೂಚಿಸಲಾಯಿತು.

ಪು.ತಿ.ನೋ...

➢ ಸಭೆಯಲ್ಲಿ ಹಾಜರಿದ್ದರಿದ್ದ ಎಲ್ಲಾ ಅಧಿಕಾರಿಗಳೊಂದಿಗೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೋವಿಡ್ ಲಸಿಕಾ ಕೇಂದ್ರ ಹಾಗೂ ಪಕ್ಕದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಕಛೇರಿ(ಖಾಲಿ) ಆವರಣದಲ್ಲಿ ಕೋವಿಡ್-19 ಪರೀಕ್ಷೆ ಕೇಂದ್ರವನ್ನು ಪರಿಶೀಲಿಸಲಾಯಿತು. (ಪರಿವೀಕ್ಷಣಾ ಸಮಯದಲ್ಲಿ ಗ್ರಹಿಸಲಾದ ಛಾಯಾಚಿತ್ರಗಳನ್ನು ಲಗತ್ತಿಸಲಾಗಿದೆ).

➢ ಕೊನೆಯಲ್ಲಿ ಮಾನ್ಯ ನೋಡಲ್ ಅಧಿಕಾರಿ ರವರು ಮಾತನಾಡುತ್ತಾ, ಪ್ರತೀ ಸಭೆಯ ಸಭಾ ನಡವಳಿಗಳನ್ನು ಸಮಿತಿಯ ಎಲ್ಲಾ ಸದಸ್ಯರುಗಳಿಗೆ ತಲುಪುವಂತೆ ಮಾಡಲು ಕಾರ್ಯದರ್ಶಿ ರವರಿಗೆ ಸೂಚಿಸಿದರು. ಸಮಿತಿಯ ಎಲ್ಲಾ ಸದಸ್ಯರುಗಳು ತಮಗೆ ವಹಿಸಿದ ಕಾರ್ಯಗಳನ್ನು ಸೂಕ್ತವಾಗಿ ನಿರ್ವಹಿಸುವಂತೆ ಹಾಗೂ ತಪ್ಪದೇ ಎಲ್ಲಾ ಸಭೆಗಳಿಗೂ ಹಾಜರಾಗುವಂತೆ ಸೂಚಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು. ಹಾಗೂ ಸಮಿತಿಯ ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ನೋಡಲ್ ಅಧಿಕಾರಿರವರ ಅನುಮೋದನೆ ಮೇರೆಗೆ)

ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ಸಮಿತಿ ಹಾಗೂ
ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ:57

ಪ್ರತಿಯನ್ನು

1. ಮಾನ್ಯ ಜಂಟಿ ಆಯುಕ್ತರು, ಪೂರ್ವ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು, ಪೂರ್ವ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
3. ಮಾನ್ಯ ಆರೋಗ್ಯ ಅಧಿಕಾರಿಗಳು, ಪೂರ್ವ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
4. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
5. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
7. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪೂರ್ವ ವಲಯ) ಅವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
8. . ಕಂದಾಯ ಅಧಿಕಾರಿಗಳು, ಸಿ.ವಿ.ರಾಮನ್‌ನಗರ ವಿಭಾಗ ರದರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು ಸಿ.ವಿ.ರಾಮನ್‌ನಗರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
10. ಸಹಾಯಕ ಕಂದಾಯ ಅಧಿಕಾರಿಗಳು ಸಿ.ವಿ.ರಾಮನ್‌ನಗರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
12. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಕಛೇರಿಯ ಕಡತಕ್ಕೆ,